ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ಬೆಂಗಳೂರು ನಗರ ಜಿಲ್ಲೆ, ವಾರ್ತಾ ಸೌಧ, ಸಂಖ್ಯೆ17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು-560 001

ಸಂ:ಉನಿ/ವಾಸಾಸಂಇ/ಬೆಂನಜಿ /2023-24/ ದಿನಾಂಕ: 21-09-2023

ಗೆ,

ಮಾನ್ಯ ಕುಲಸಚಿವರು,

ಬೆಂಗಳೂರು ವಿಶ್ವವಿದ್ಯಾಲಯ

ಜ್ಞಾನಭಾರತಿ,

ಬೆಂಗಳೂರು..

ಮಾನ್ಯರೆ,

ವಿಷಯ: “ಬಾಪೂಜಿ ಪ್ರಬಂಧ ಸ್ಪರ್ಧೆ”ಗೆ ಪ್ರಬಂಧಗಳನ್ನು ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗಗಳಿಂದ ಕಳುಹಿಸುವ ಕುರಿತು.

ಉಲ್ಲೇಖ: 1. ಸಂ: ವಾಸಾಸಂ/ಇಎಂಎಂ/ಇ8/ಗಾಸೇಪ್ರ-ಪ್ರಸ್ಪರ್ಧೆ/2023-24/4880-15 ದಿನಾಂಕ: 13-09-2023

2. ದಿನಾಂಕ: 11-09-2023 ರ ಸರ್ಕಾರದ ಆದೇಶ ಸಂಖ್ಯೆ: ಕೆಸಿಐ-ವಿಪಿಪಿ/27/2023

***

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 154ನೇ ಜಯಂತಿಯ ಅಂಗವಾಗಿ ಪ್ರೌಢಶಾಲೆ ವಿಭಾಗ/ಪದವಿ ಪೂರ್ವ ಶಿಕ್ಷಣ ವಿಭಾಗ ಹಾಗೂ ಪದವಿ-ಸ್ನಾತಕೋತ್ತರ ಪದವಿ ವಿಭಾಗ ಹೀಗೆ ಒಟ್ಟು ಮೂರು ಪ್ರತ್ಯೇಕ ವಿಭಾಗಗಳಲ್ಲಿ ಜಿಲ್ಲಾ ಮತ್ತು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಪ್ರತಿ ವಿಭಾಗಗಳಿಂದ ಆಯ್ಕೆಯಾಗುವ ಮೂರು ಅತ್ಯುತ್ತಮ ಪ್ರಬಂಧಗಳಿಗೆ ಜಿಲ್ಲಾ ಮಟ್ಟದಲ್ಲಿ “ಮಹಾತ್ಮ ಗಾಂಧೀಜಿ ಜಯಂತಿ” ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡುವುದರ ಜತೆಗೆ ಆ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಗೆ ಕಳುಹಿಸಲಾಗುತ್ತದೆ.

ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಸಮಿತಿಯು ಪ್ರಬಂಧಗಳನ್ನು ಆಯ್ಕೆ ಮಾಡಲಿದೆ. ಪ್ರಬಂಧ ಸ್ಪರ್ಧೆಯ ವಿಷಯ, ಆಯ್ಕೆ ವಿಧಾನ, ಪ್ರಬಂಧ ರಚನೆ ಮಾರ್ಗಸೂಚಿ ಹಾಗೂ ಬಹುಮಾನಗಳ ಕುರಿತು ವಿವರವಾದ ಮಾಹಿತಿಯನ್ನು ಈ ಪತ್ರದ ಜತೆ ಲಗತಿಸಲಾಗಿದೆ.

ಪದವಿ ಹಾಗೂ ಸ್ನಾತಕೋತರ ಪದವಿ ವಿಭಾಗ:-

1. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುದಗಳು.
2. ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು
3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗ್ಗೆ
4. ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು.

ಪದವಿ ಹಾಗೂ ಸ್ನಾತಕೋತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು ಕಾಲೇಜು ಹಾಗೂ ಸ್ನಾತ್ತಕೋತ್ತರ ಮೂರು ಪ್ರತ್ಯೇಕ ವಿಭಾಗಗಳ ಪ್ರಬಂಧ ಸ್ಪರ್ಧೆ ವಿಜೇತರಾದವರಿಗೆ ಪ್ರಥಮ ಸ್ಥಾನಕ್ಕೆ ರೂ 3000/-, ದ್ವಿತೀಯ ಸ್ಥಾನಕ್ಕೆ ರೂ. 2000/-, ತೃತೀಯ ಸ್ಥಾನಕ್ಕೆ ರೂ.1000/-.

ಪ್ರಬಂಧ ರಚಿಸಲು ಮಾರ್ಗಸೂಚಿಗಳು:

- ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು.
- ಶುದ್ಧ ಕೈಬರಹ ಅಥವಾ ನುಡಿ ಇಲ್ಲವೇ ಯೂನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು.
- ಆಕರವಾಗಿ ಬಳಸಿದ ಪರಾಮರ್ಶನ/ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು
- ಪ್ರಬಂಧಕಾರರ ಹೆಸರು, ವಿಳಾಸ ಹಾಗೂ ದೂರವಾಣಿ ಸಂಖ್ಯೆ ನಮೂದಿಸಿರಬೇಕು
- ಶಾಲೆ/ಕಾಲೇಜುಗಳ ಮುಖ್ಯಸ್ಥರುಗಳ ಮೂಲಕವೇ ಜಿಲ್ಲಾ ವಾರ್ತಾಧಿಕಾರಿಗಳಿಗೆ ಪ್ರಬಂಧಗಳನ್ನು ತಲುಪಿಸಬೇಕು
- ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು
- ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ಈ ಮೇಲ್ಕಂಡ ಮಾರ್ಗಸೂಚಿ ಅನುಸರಿಸಿ ಆಸಕ್ತ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಒಂದು ದಿನ ಸ್ಪರ್ಧೆ ಏರ್ಪಡಿಸಿ ಅತ್ಯುತ್ತಮ ಎಂಟು ಪ್ರಬಂಧಗಳನ್ನು **ದಿನಾಂಕ: 26-09-2023** ರ ಒಳಗಾಗಿ **" ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ನಂ.17, ಭಗವಾನ ಮಹಾವೀರ್ ರಸ್ತೆ, ಬೆಂಗಳೂರು-560001"** ಈ ವಿಳಾಸಕ್ಕೆ ಕಳುಹಿಸಿಕೊಡುವಂತೆ ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರನ್ನು ಮೊಬೈಲ್ ಸಂಖ್ಯೆ- 9480841219 ಮೂಲಕ ಸಂಪರ್ಕಿಸಬಹುದು.

ಸಮಯಾವಕಾಶ ಕಡಿಮೆ ಇರುವುದರಿಂದ ಕೂಡಲೇ ತಮ್ಮ ವ್ಯಾಪ್ತಿಯ ಎಲ್ಲಾ ಕಾಲೇಜುಗಳಿಗೆ ಸುತ್ತೋಲೆಯನ್ನು ಕಳುಹಿಸುವ ಮೂಲಕ ನಿಗದಿತ ಅವಧಿಯಲ್ಲಿ ಪ್ರಬಂಧಗಳನ್ನು ಕಳುಹಿಸಿಕೊಡಲು ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ತಮ್ಮಲ್ಲಿ ಕೋರುತ್ತೇನೆ.

ತಮ್ಮ ವಿಶ್ವಾಸಿ

(ಪಲ್ಲವಿ ಹೊನ್ನಾಪುರ)
ಉಪನಿರ್ದೇಶಕರು

ಪ್ರತಿಯನ್ನು:

1. ಮಾನ್ಯ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳು ಕಚೇರಿ, ಕೆ.ಜಿ.ರಸ್ತೆ, ಬೆಂಗಳೂರು ಇವರ ಮಾಹಿತಿಗಾಗಿ ಆದರಪೂರ್ವಕವಾಗಿ ಸಲ್ಲಿಸದೆ.